# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕರ್ನಾಟಕ ಕನ್ನಡ ಪ್ರಭ ದಿನಾಂಕ : DATE 30/1/21

# ವಿಧಾನಸಭೆಯಲ್ಲಿ ನಿನ್ನೆ 11 ವಿಧೇಯಕ ಮಂಡನೆ

ಕ. ಪ್ರ 30/1/21

ವಿಧಾನಸಭೆ: ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ವ್ಯವಸ್ಥಾಪನಾ ಮಂಡಳಿ ರಚನೆ ಮಾಡುವ ಸಂಬಂಧ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, ಹಣಕಾಸು ಸಂಸ್ಥೆಗಳಿಂದ ವಂಚನೆ ತಪ್ಪಿಸುವ ಉದ್ದೇಶದಿಂದ ಕರ್ನಾಟಕ ಹಣಕಾಸು ಸಂಸ್ಥೆಯಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ ಸೇರಿದಂತೆ 11 ವಿಧೇಯಕಗಳನ್ನು ಶುಕ್ರವಾರ ವಿಧಾನಸಭೆಯಲ್ಲಿ ಮಂಡಿಸಲಾಯಿತು.

ಕೋವಿಡ್ ಸೇರಿದಂತೆ ಸಾಂಕ್ರಾಮಿಕ ರೋಗ ತಡೆಯುವಲ್ಲಿ ಕಾರ್ಯನಿರತ ನೌಕರರ ವಿರುದ್ಧ ಹಿಂಸಾತ್ಮಕ ಕೃತ್ಯ ಎಸಗುವವರ ವಿರುದ್ಧ ಕ್ರಮ ಕೈಗೊಳ್ಳುವ ಕರ್ನಾಟಕ ಸಾಂಕ್ರಾಮಿಕ ರೋಗಗಳ (ತಿದ್ದುಪಡಿ) ವಿಧೇಯಕ, ಖಾಸಗಿ ವಿಶ್ವವಿದ್ಯಾಲಯ ಸ್ಥಾಪಿಸುವ ಉದ್ದೇಶದಿಂದ ಶ್ರೀಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ವಿಧೇಯಕ, ವಿದ್ಯಾಶಿಲ್ಪ ವಿಶ್ವವಿದ್ಯಾಲಯ ವಿಧೇಯಕ, ಐಟ್ರಿಯಾ ವಿಶ್ವವಿದ್ಯಾಲಯ ವಿಧೇಯಕ, ಬೆಂಗಳೂರಿನ ಡಾ.ಬಿ.ಆರ್.ಅಂಬೇಡ್ಕರ್ ಅರ್ಥಶಾಸ್ತ್ರ ವಿದ್ಯಾಲಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, ಲೋಕಾಯುಕ್ತ ಮತ್ತು ಉಪಲೋಕಾಯುಕ್ತರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವೇತನಕ್ಕೆ ಸಮಾನವಾದ ವೇತನ ನೀಡುವ ಸಂಬಂಧ ಕರ್ನಾಟಕ ಲೋಕಾಯುಕ್ತ (ಮೂರನೇ ತಿದ್ದುಪಡಿ) ವಿಧೇಯಕ, ಭೂಮಿ ಮತ್ತು ಕಟ್ಟಡಗಳ ಮೇಲಿನ ತೆರಿಗೆ ಬದಲಿಸುವ ಸಂಬಂಧ ಕರ್ನಾಟಕ ಪೌರಸಭೆಗಳ (ಎರಡನೇ ತಿದ್ದುಪಡಿ) ವಿಧೇಯಕ, ಮಾಲೀಕತ್ವ ವಿಳಾಸ ಬದಲಾವಣೆಗೆ ವಿಧಿಸುವ ತೆರಿಗೆ ಸಂಬಂಧ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧಾರಣೆ (ಎರಡನೇ ತಿದ್ದುಪಡಿ) ವಿಧೇಯಕ, ನಿಗದಿತ ಅವಧಿಯಲ್ಲಿ ತೆರಿಗೆ ಪಾವತಿಸುವವರಿಗೆ ರಿಯಾಯಿತಿ ನೀಡುವ ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕಗಳನ್ನು ಮಂಡಿಸಲಾಗಿದೆ.